ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಯರಗೇರಾ–584133, ರಾಯಚೂರು, ಕರ್ನಾಟಕ ರಾಜ್ಯ, ಭಾರತ

Office No. +91 9141030953 ಪರೀಕ್ಷಾ ವಿಭಾಗ E-mail: registrarevrur@gmail.com

ಕ್ರ.ಸಂ: ರಾವಿರಾ/ಪರೀಕ್ಷಾ/NAD/2024-25/683 ದಿನಾಂಕ:12.11.2024

## ಸುತ್ತೋಲೆ

**ವಿಷಯ:** ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸಗಳ ವಿದ್ಯಾರ್ಥಿಗಳ ಆಧಾರ್ ವ್ಯಾಲಿಡೇಶನ್‌ನಲ್ಲಿ ಆದ ಲೋಪದೊಷಗಳ ಕುರಿತು.

*****

ಈ ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ರಾಯಚೂರು ವಿಶ್ವವಿದ್ಯಾಲಯದ ಅಧೀನಕ್ಕೆ ಒಳಪಡುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಎಲ್ಲಾ ಸ್ನಾತಕ ಹಾಗೂ ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸುವುದೇನೆಂದರೆ, ವಿದ್ಯಾರ್ಥಿಗಳ ಆಧಾರ್ ವ್ಯಾಲಿಡೇಶನ್ ಮಾಡುವುದರಲ್ಲಿ ಬಹಳಷ್ಟು ಕಾಲೇಜುಗಳು/ವಿದ್ಯಾರ್ಥಿಗಳು ತಮ್ಮ ಆಧಾರ್‌ನ್ನು ಬಿಟ್ಟು ತಮ್ಮ ಕುಟುಂಬರವರ ಅಥವ ಸಂಬಂಧಿಕರ ಅಥವ ಬೇರೆಯವರ ಆಧಾರ್‌ನ್ನು ಬಳಸಿ ಆಧಾರ್ ವ್ಯಾಲಿಡೇಶನ್ ಮಾಡಿರಿವುದು ಕಂಡುಬಂದಿದೆ. ಹೀಗೆ ಮಾಡುವುದರಿಂದ ವಿದ್ಯಾರ್ಥಿಗಳ ಮುಂದಿನ ಎಲ್ಲಾ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆ ಅನುಭವಿಸಬೇಕಾಗುತ್ತದೆ. ಇದಕ್ಕೆ ನೇರವಾಗಿ ವಿದ್ಯಾರ್ಥಿಗಳು/ಪ್ರಾಂಶುಪಾಲರುಗಳೇ ಹೊಣೆಗಾರರಾಗಿರುತ್ತಾರೆ. ಇದರಲ್ಲಿ ವಿಶ್ವವಿದ್ಯಾಲಯದ ಯಾವುದೇ ಪಾತ್ರವಿರುವುದಿಲ್ಲಾ. ತದನಂತರದಲ್ಲಿ ಆಧಾರ್‌ನಲ್ಲಿ ಬದಲಾವಣೆಗೆ ಕೂಡ ವಿಶ್ವವಿದ್ಯಾಲಯದ ಮಟ್ಟದಲ್ಲಿ ಯಾವುದೇ ತಿದ್ದುಪಡಿಗೆ ಅವಕಾಶವಿರುವುದಿಲ್ಲಾ. ಆದ್ದರಿಂದ ವಿದ್ಯಾರ್ಥಿಗಳ ಆಧಾರ್ ವ್ಯಾಲಿಡೇಶನ್ ಮಾಡುವಾಗ ವಿದ್ಯಾರ್ಥಿಯದೇ ಆಧಾರ್ ಹಾಗೂ ಆಧಾರ್ ಜೋಡಣೆಗೊಂಡ ಮೊಬೈಲ್ ನಂ. ನ್ನು ಮಾತ್ರ ಬಳಸಿ ಆಧಾರ ವ್ಯಾಲಿಡೇಶನ್ ಮಾಡುವುದಾಗಿ ಈ ಮೂಲಕ ಸೂಚಿಸಲಾಗಿದೆ.

(ಪ್ರೊ. ಯರಿಸ್ವಾಮಿ ಎಂ.)
ಕುಲಸಚಿವರು (ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

ಗೆ,
ರಾಯಚೂರು ವಿಶ್ವವಿದ್ಯಾಲಯದ ಅಧೀನಕ್ಕೆ ಒಳಪಡುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಸ್ನಾತಕ ಹಾಗೂ ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರುಗಳ ಗಮನಕ್ಕೆ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿಗಳು:

1. ಮಾನ್ಯ ಕುಲಪತಿಗಳು ಆಪ್ತ ಕಾರ್ಯದರ್ಶಿಗಳು/ ಮಾನ್ಯ ಕುಲಸಚಿವರ ಆಪ್ತ ಸಹಾಯಕ ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
2. ಕುಲಸಚಿವರು ಮೌಲ್ಯಮಾಪನ ಆಪ್ತಕಾರ್ಯದರ್ಶಿ ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಉಪಕುಲಸಚಿವರು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
4. ಕಚೇರಿ ಪ್ರತಿ.